**"Azadi Ka Amrit Mahotsav"**
**INDIA@75**
**ಕೃಷಿ ವಿಶ್ವ ವಿದ್ಯಾನಿಲಯ**
**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**
**ಜಿ.ಕೆ.ವಿ.ಕೆ., ಬೆಂಗಳೂರು–560065**

*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

**ದಿನಾಂಕ:** 01.10.2021

## ಬೆಂಗಳೂರು ನಗರ ಜಿಲ್ಲೆಗೆ ಸೀಮಿತವಾಗಿದೆ.

### ಕಳೆದ ಐದು ದಿನಗಳ ಹವಾಮಾನ ಸಾರಂಶ

| ನಿಯತಾಂಕಗಳು | 27.09.2021 | 28.09.2021 | 29.09.2021 | 30.09.2021 | 01.10.2021 |
|---|---|---|---|---|---|
| ಮಳೆ (ಮಿ ಮೀ) | 5.4 | 0 | 1.4 | 0 | 2.2 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 28.0 | 26.8 | 27.4 | 27.2 | 27.2 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 18.0 | 18.6 | 18.4 | 18.8 | 19.6 |
| ಮೋಡ ( ಪ್ರಮಾಣ) | 4 | 6 | 4 | 3 | 3 |
| ಆರ್ದ್ರತೆ 7.20 ಬೆ (ಶೇ) | 93 | 93 | 95 | 89 | 93 |
| ಆರ್ದ್ರತೆ 2.20 ಮ (ಶೇ) | 59 | 59 | 62 | 59 | -- |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 4.9 | 8.0 | 7.2 | 5.8 | 8.1 |
| ಗಾಳಿಯ ದಿಕ್ಕು ( ಡಿಗ್ರಿ) | 270 | 230 | 270 | 270 | 320 |

### ಈ ವಾರದ ಹವಾಮಾನ ಮುನ್ಸೂಚನೆ (ಭಾರತೀಯ ಹವಾಮಾನ ಇಲಾಖೆ)
(ದಿನಾಂಕ 02–10–2021 ರಿಂದ 06–10–2021 ವರೆಗೆ)

| ನಿಯತಾಂಕಗಳು | 02.10.2021 | 03.10.2021 | 04.10.2021 | 05.10.2021 | 06.10.2021 |
|---|---|---|---|---|---|
| ಮಳೆ (ಮಿ ಮೀ) | 7 | 7 | 19 | 17 | 19 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 29 | 28 | 28 | 28 | 28 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 20 | 20 | 21 | 21 |
| ಮೋಡ ( ಪ್ರಮಾಣ) | 5 | 6 | 3 | 5 | 5 |
| ಆರ್ದ್ರತೆ 7.20 ಬೆ (ಶೇ) | 87 | 87 | 87 | 89 | 89 |
| ಆರ್ದ್ರತೆ 2.20 ಮ (ಶೇ) | 68 | 68 | 68 | 70 | 70 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 4 | 3 | 3 | 3 | 3 |
| ಗಾಳಿಯ ದಿಕ್ಕು ( ಡಿಗ್ರಿ) | 112 | 117 | 112 | 101 | 90 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಂಶ **28.0-29.0$^{o}$C** ಮತ್ತು ಕನಿಷ್ಠ **20.0-21.0$^{o}$C** ಇರುವ ಸಾಧ್ಯತೆ ಇದೆ. ಬೆಳೆಗಿನ ಆರ್ದ್ರತೆ ಪ್ರಮಾಣ ಶೇ **87-89 %** ಇದ್ದು ಮಧ್ಯಾಹ್ನ **68-71 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **3-4** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

**"ಹಸ್ತಕ್ಕೆ ಹದ, ಚಿತ್ತಕ್ಕೆ ಬೆಳೆ !"**

- ಹಸ್ತ ಮಳೆಯು ಕಾಲವು ಸೆಪ್ಟೆಂಬರ್ ತಿಂಗಳ 27 ರಿಂದ ಅಕ್ಟೋಬರ್ ತಿಂಗಳ 10 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 105.8 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ | ➢ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯ ಮುನ್ಸೂಚನೆ ಇದೆ, ತದನಂತರ ದೀರ್ಘಾವಧಿ ಹವಾಮಾನ |

| | |
|---|---|
| | ಮುನ್ಸೂಚನೆಯ ಪ್ರಕಾರ ಸೆಪ್ಟೆಂಬರ್ ಎರಡನೇ ಮತ್ತು ಮೂರನೇ ವಾರದ ವರೆಗೂ ಸರಾಸರಿಗಿಂತ ಕಡಿಮೆ ಮಳೆಯ ಸಾಧ್ಯತೆ ಇರುವುದರಿಂದ ತಡ ಮುಂಗಾರು ಬಿತ್ತನೆಯನ್ನು ಮುಂದೂಡಿ.<br>➢ ತೊಗರಿಯಲ್ಲಿ ಗೂಡುಮಾರುಹುಳುವಿನ ಹತೋಟಿಗೆ ಹೂ ಬರುವ ಮೊದಲು ಕುಡಿಗಳ ಮೇಲೆ ಮಿಥೋಮಿಲ್ 40 ಎಸ್.ಪಿ 2 ಗ್ರಾಂ/ ನೀರಿನಲ್ಲಿ ಬೆರೆಸಿ ಸಿಂಪಡಿಸಿ.<br>➢ ಕಿತ್ತಂತಹ ಕಳೆ ಮತ್ತು ಬದುಗಳಲ್ಲಿ ಬೆಳೆದಿರುವ ಗ್ಲಿರೀಸಿಡಿಯ (ಹಸಿರೆಲೆ ಗೊಬ್ಬರದ ಗಿಡ) ಸೊಪ್ಪನ್ನು ಉಪಯೋಗಿಸಿಕೊಂಡು ಸಾಲುಗಳ ಮಧ್ಯದಲ್ಲಿ ಭೂ-ಹೊದಿಕೆಯಾಗಿ ಹರಡುವುದು<br>➢ ಜುಲೈ ತಿಂಗಳ ಎರಡನೇ ವಾರ ಮತ್ತು ಆಗಸ್ಟ್ ತಿಂಗಳ ಮೊದಲ ವಾರದಲ್ಲಿ ಬಿತ್ತನೆ ಮಾಡಿರುವ ರಾಗಿ ಬೆಳೆಯಲ್ಲಿ ಕಳೆ ನಿರ್ವಹಣೆ, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಅಂತರ ಬೇಸಾಯವನ್ನು ಕೈಗೊಳ್ಳುವುದು.<br>➢ ಇಳಿಜಾರಿಗೆ ಅಡ್ಡಲಾಗಿ ಉಳುಮೆಯನ್ನು ಮಾಡಿ ಇದರಿಂದ ಮಣ್ಣಿನ ಸವಕಳಿ ಕಡಿಮೆಯಾಗುತ್ತದೆ ಮತ್ತು ತೇವಾಂಶದ ಸಂರಕ್ಷಣೆಯಾಗುತ್ತದೆ.<br><br>**ಎರಡುಬೆಳೆ ಪದ್ಧತಿಯಲ್ಲಿ ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ಮೇ ತಿಂಗಳಲ್ಲಿ ಬಿತ್ತಿದ ಪೂರ್ವ ಮುಂಗಾರು ಬೆಳೆಗಳನ್ನು ಕಟಾವು ಮಾಡಿ ತಕ್ಷಣ ತಡವಾದ ಮುಂಗಾರು ಬೆಳೆಗಳಾದ ರಾಗಿ: ಕೆ.ಎಮ್,ಆರ್-301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್-365, ಜಿ.ಪಿ.ಯು-26, 45 & 48 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>ಅಲಸಂದೆ : ಟಿ.ವಿ.ಎಕ್ಸ್-944, ಕೆ.ಬಿ.ಸಿ-1, ಅವರೆ-ಎಚ್.ಎ-3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್-1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ-9 ಮತ್ತು ಕೆ.ಬಿ.ಎಚ್-1, ಹುಚ್ಚೆಳ್ಳು ತಳಿಗಳನ್ನು ಆಗಸ್ಟ್ ತಿಂಗಳ ಒಳಗಾಗಿ ಬಿತ್ತನೆ/ನಾಟಿ ಮಾಡುವುದು.<br>ಮುಸುಕಿನ ಜೋಳ: ಗಂಗಾ-11, ಡೆಕ್ಕನ್-103, ವಿಜಯ ಕಾಂಪೋಸಿಟ್, ಕಾಂಪೋಸಿಟ್ ಎನ್.ಎ.ಸಿ-6004,6002, ನಿತ್ಯಶ್ರೀ-ಸಂಕರಣ ತಳಿ ಮತ್ತು ಹೇಮ -ಸಂಕರಣ ತಳಿ ಬಿತ್ತಲು ಸೂಚಿಸಲಾಗಿದೆ.<br>ಮೇಲಿನ ಮುಸುಕಿನ ಜೋಳ ತಳಿಗಳು ಕೇದಿಗೆ ರೋಗ, ಎಲೆ ಅಂಗಮಾರಿ ರೋಗ ಮತ್ತು ಕಾಂಡ ಕೊರೆಯುವ ಕೀಟ ನಿರೋಧಕ ಶಕ್ತಿ ಹೊಂದಿವೆ. |
| | **ಹೈನುಗಾರಿಕೆ** |
| **ಪಶುಸಂಗೋಪನೆ** | ➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ-ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಸೂಕ್ತವಾದ ಹವಾಮಾನ ಮತ್ತು ಯಥೇಚ್ಛ ಮೇವು ಸಿಗುವುದರಿಂದ ಹೈನುಗಾರಿಕೆ, ಹಂದಿ ಸಾಕಾಣಿಕೆ, ಕುರಿ ಮತ್ತು ಮೇಕೆ ಸಾಕಾಣಿಕೆಗೆ ಅನುವು ಮಾಡಿಕೊಡುತ್ತದೆ.<br>➢ ಹೈನುಗಾರಿಕೆಯಲ್ಲಿ ರೋಗಗಳ ನಿಯಂತ್ರಣಕ್ಕೆ ಪ್ರತಿ ವರ್ಷ ಲಸಿಕೆಯನ್ನು ಮಾಡಿಸುವುದು ಉತ್ತಮ.<br>➢ ಹಿಂಡಿ ಬೂಸವನ್ನು ಮೂರು-ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |


**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**


**ಮೊಬೈಲ್ ಆಫ್:**

- ➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.